ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/04/ಸುತ್ತೋಲೆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ : 10.05.2022.

## ಸುತ್ತೋಲೆ

ವಿಷಯ : ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಗ್ರಂಥಪಾಲಕರುಗಳಿಗೆ ಕೌಶಲ್ಯಾಭಿವೃದ್ಧಿ ಆಧಾರಿತ ಆನ್‌ಲೈನ್ ಕೋರ್ಸ್‌ನಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ : ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರ ಪತ್ರಸಂಖ್ಯೆ : VTU/PS/2021-22/421, ದಿನಾಂಕ : 19.04.2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರು ಎಲ್.ಐ.ಎಸ್ ಅಕಾಡೆಮಿ, ಬೆಂಗಳೂರು ಇವರ ಸಹಯೋಗದೊಂದಿಗೆ ಇಲಾಖಾ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಗ್ರಂಥಪಾಲಕರುಗಳಿಗೆ ಕೌಶಲ್ಯಾಭಿವೃದ್ಧಿ ಸಂಬಂಧ ಈ ಕೆಳಕಂಡ ಕೋರ್ಸ್‌ಗಳನ್ನು ಆನ್‌ಲೈನ್ ಮುಖಾಂತರ ಹಮ್ಮಿಕೊಂಡು ಗ್ರಂಥಪಾಲಕರುಗಳು ಸದರಿ ಕೋರ್ಸ್‌ನಲ್ಲಿ ಭಾಗವಹಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

1. Library Automation & Digital Library Technologies
2. Research Integrity And Scholarity Publishing
3. Scientometrics and Library Data Analytics
4. E-Resource Management & E-Publishing
5. Web Technologies for libraries & DBMS
6. Intellectual Property Management and patenting

ಈ ಸಂಬಂಧ, ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆಸಕ್ತ ಗ್ರಂಥಪಾಲಕರುಗಳು ಸದರಿ ಕೋರ್ಸುಗಳಿಗೆ ಭಾಗವಹಿಸಲು ಇಚ್ಛಿಸಿದ್ದಲ್ಲಿ, ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಶುಲ್ಕವನ್ನು ಸಂಬಂಧಿಸಿದ ಗ್ರಂಥಪಾಲಕರೆ ಪಾವತಿಸಿ ಕಾಲೇಜಿನಿಂದಲೇ ಆನ್‌ಲೈನ್ ಮುಖಾಂತರ ಭಾಗವಹಿಸಲು ಅನುಮತಿ ನೀಡಲಾಗಿದೆ.

ಈ ಬಗ್ಗೆ ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬಹುದಾದ ವೆಬ್‌ಸೈಟ್ ವಿಳಾಸ : http://lisaias.lisacademy.org/

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ :

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, "ಜ್ಞಾನ ಸಂಗಮ", ಬೆಳಗಾವಿ – 590018. (ಮಾಹಿತಿಗಾಗಿ)
4. ಕಛೇರಿ ಪ್ರತಿ.